ಘಟಕಗಳನ್ನು (ಕೋ-ಜೆನೆರೇಷನ್ ಪ್ಲಾನ್ಟ್) ಅತ್ಯಾಧುನಿಕ ವಾಯು ಮಾಲಿನ್ಯ ನಿಯಂತ್ರಣ ಘಟಕಗಳೊಂದಿಗೆ ಸ್ಥಾಪಿಸಲು ಮಂಡಳಿಯು ಒಪ್ಪಿಗೆಯನ್ನು ಕೋರಿ ಅರ್ಜಿಯನ್ನು ಸಲ್ಲಿಸಿತ್ತು. ಮಂಡಳಿಯು ಈ ಪ್ರಸ್ತಾವನೆಗೆ ದಿನಾಂಕ:31-8-2000ರಂದು ಒಪ್ಪಿಗೆ ನೀಡಿದೆ. ಈ ಯೋಜನೆ ಕಾಮಗಾರಿಗಳನ್ನು ಉದ್ದಿಮೆಯು ಇನ್ನೂ ಕೈಗೆತ್ತಿಕೊಳ್ಳಬೇಕಿದೆ.

ಈ ಮಧ್ಯೆ ಮಂಡಳಿಯು ಉದ್ದಿಮೆಯ ವಿರುದ್ಧ ಮಂಡ್ಯದ ಜೆ.ಎಂ.ಎಫ್.ಸಿ. ನ್ಯಾಯಾಲಯದಲ್ಲಿ ದಿನಾಂಕ.29-7-27ರಂದು ಉದ್ದಿಮೆಯು ಮಂಡಳಿಯ ನಿಬಂಧನೆಗಳನ್ನು ಅನುಸರಿಸದ ಕಾರಣ ಕ್ರಿಮಿನಲ್ ಮೊಕದ್ದಮೆಯನ್ನು ದಾಖಲು ಮಾಡಿದ್ದು ಈ ಮೊಕದ್ದಮೆ ಈಗ ಪ್ರಗತಿಯಲ್ಲಿದೆ.

ಮಂಡ್ಯದಲ್ಲಿ ಮಿನಿ ವಿಧಾನಸೌಧ ನಿರ್ಮಾಣ ಮತ್ತು ಮಂಡ್ಯ ತಾಲ್ಲೂಕು ಕಛೇರಿಯಲ್ಲಿ ಗಣಕೀಕರಣ.

ಚುಕ್ಕೆ ಗುರುತಿಲ್ಲದ LA ಪ್ರಶ್ನೆ ಸಂಖ್ಯೆ : 682(232)

ಸದಸ್ಯರ ಹೆಸರು : ಶ್ರೀ ಆತ್ಮಾನಂದ ಎಂ.ಎಸ್.(ಮಂಡ್ಯ)

ಉತ್ತರಿಸುವ ಸಚಿವರು : ಶ್ರೀ ಹೆಚ್.ಸಿ.ಶ್ರೀಕಂಠಯ್ಯ(ಕಂದಾಯ ಸಚಿವರು)

ಪ್ರಶ್ನೆ

1. ಮಂಡ್ಯ ತಾಲ್ಲೂಕಿನಲ್ಲಿ ಮಿನಿ ವಿಧಾನಸೌಧ ಇಲ್ಲದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

2. ಹಾಗಿದ್ದಲ್ಲಿ ಮಿನಿ ವಿಧಾನ ಸೌಧದ ನಿರ್ಮಾಣದ ಬಗೆಗೆ ಸರ್ಕಾರ ಕೈಗೊಂಡ ಕ್ರಮವೇನು?

3. ಮಂಡ್ಯ ತಾಲ್ಲೂಕಿನ ಕಛೇರಿಯಲ್ಲಿನ ಗಣಕೀಕರಣ ಕಾರ್ಯವು ಯಾವ ಹಂತದಲ್ಲಿದೆ?

4. ಯಾವಾಗ ಪೂರ್ಣಗೊಳಿಸಲಾಗುವುದು?

ಉತ್ತರ

1. ಹೌದು.

2. ಹುಡ್ಕೊ ಸಂಸ್ಥೆಯ ಸಾಲದ ಸಹಾಯದಿಂದ ಮಂಡ್ಯದಲ್ಲಿ ಮಿನಿ ವಿಧಾನ ಸೌಧ ನಿರ್ಮಾಣ ಪ್ರಸ್ತಾಪಿಸಲಾಗಿದೆ.

3. ಸಂಪೂರ್ಣಗೊಂಡಿದೆ.

4. ಉದ್ಭವಿಸುವುದಿಲ್ಲ.

ಕೇಂದ್ರ ಸರ್ಕಾರದಿಂದ ರಾಜ್ಯ ಸರ್ಕಾರಕ್ಕೆ ಸಿ.ಆರ್.ಎಫ್. ಯೋಜನೆಯಡಿಯಲ್ಲಿ ಬಿಡುಗಡೆಯಾದ ಅನುದಾನ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 683(234)

ಸದಸ್ಯರ ಹೆಸರು : ಶ್ರೀ ಆತ್ಮಾನಂದ ಎಂ.ಎಸ್.(ಮಂಡ್ಯ)

ಉತ್ತರಿಸುವ ಸಚಿವರು : ಶ್ರೀ ಧರ್ಮಸಿಂಗ್(ಲೋಕೋಪಯೋಗಿ ಸಚಿವರು)

ಪ್ರಶ್ನೆ

ಅ) 2001-2002ನೇ ಸಾಲಿನಲ್ಲಿ ಕೇಂದ್ರ ಸರ್ಕಾರದಿಂದ ರಾಜ್ಯ ಸರ್ಕಾರಕ್ಕೆ ಸಿ.ಆರ್.ಎಫ್. ಯೋಜನೆಯಡಿಯಲ್ಲಿ ಬಿಡುಗಡೆಯಾಗಿರುವ ಹಣ ಎಷ್ಟು?

ಆ) ಇದರಲ್ಲಿ ಎಷ್ಟು ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ? (ಜಿಲ್ಲಾವಾರು ವಿವರಗಳನ್ನು ನೀಡುವುದು)

ಇ) ಸಿ.ಆರ್.ಎಫ್. ಹಣವನ್ನು ವಿಧಾನಸಭಾ ಕ್ಷೇತ್ರವಾರು ಬಿಡುಗಡೆ ಮಾಡಲಾಗಿದೆಯೇ?

ಉತ್ತರ

ಅ) 2001-02ನೇ ಸಾಲಿನಲ್ಲಿ ಕೇಂದ್ರ ಸರ್ಕಾರದಿಂದ ರಾಜ್ಯ ರಸ್ತೆ ನಿಧಿಯಡಿಯಲ್ಲಿ ರಾಜ್ಯ ಸರ್ಕಾರಕ್ಕೆ ಇದುವರೆವಿಗೂ ಹಣ ಬಿಡುಗಡೆಯಾಗಿರುವುದಿಲ್ಲ.